ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
ARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

೨೭

ಖೆ / ವಿಷಯ : DEPARTMENT / SUBJECT: ವಿಧಾನಸಭೆ ಅಧಿವೇಶನ

ಕೆಯ ಹೆಸರು : NAME OF THE NEWS PAPER: ... ದಿನಾಂಕ : DATE : ...

ಚಳಿಗಾಲದ ಅಧಿವೇಶನ ರದ್ದು | ಜನವರಿ ಅಂತ್ಯದೊಳಗೆ ಬಜೆಟ್ ಕಲಾಪ

ಕೋವಿಡ್ ತಾಪಕ್ಕೆ ಕರಗಿದ ಅಧಿವೇಶನ

ಹೊಸದಿಲ್ಲಿ: ಕೋವಿಡ್-19 ಸಾಂಕ್ರಾಮಿಕದ ಆತಂಕದ ಹಿನ್ನೆಲೆಯಲ್ಲಿ ಈ ಬಾರಿಯ ಚಳಿಗಾಲದ ಅಧಿವೇಶನ ನಡೆಸುವುದಿಲ್ಲ ಎಂದು ಕೇಂದ್ರ ಸರಕಾರ ತಿಳಿಸಿದೆ. ಬದಲಿಗೆ ಜನವರಿ ಅಂತ್ಯದ ವೇಳೆಗೆ ಒಟ್ಟಿಗೇ ಬಜೆಟ್ ಅಧಿವೇಶನ ಆರಂಭಿಸಲು ನಿರ್ಧರಿಸಲಾಗಿದೆ.

ಚಳಿಗಾಲದಲ್ಲಿ ಕೋವಿಡ್ 2ನೇ ಅಲೆಯ ಭೀತಿ ಇರುವ ಹಿನ್ನೆಲೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಲೋಕಸಭೆಯಲ್ಲಿ ಕಾಂಗ್ರೆಸ್ ಸದನದ ನಾಯಕ ಅಧೀರ್ ರಂಜನ್ ಚೌಧರಿ ಅವರಿಗೆ ಬರೆದ ಪತ್ರದಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ ಜೋಶಿ ತಿಳಿಸಿದ್ದಾರೆ. ರೈತರು ನೂತನ ಕೃಷಿ ಕಾಯಿದೆ ರದ್ದಿಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿರುವ ಹಿನ್ನೆಲೆಯಲ್ಲಿ, ಈ ಬಗ್ಗೆ ಚರ್ಚಿಸಿ ಸೂಕ್ತ ಕಾನೂನು ಕಿದ್ದುಪಡಿಗಾಗಿ ಅಧಿವೇಶನ ಕರೆಯಬೇಕೆಂದು ಕೋರಿ ಅಧೀರ್ ರಂಜನ್ ಅವರು ಬರೆದಿದ್ದ ಪತ್ರಕ್ಕೆ ಜೋಶಿ ಪ್ರತ್ಯುತ್ತರ ನೀಡಿದ್ದಾರೆ.



''ಸರಕಾರ ಆದಷ್ಟು ಶೀಘ್ರದಲ್ಲೇ ಮುಂದಿನ ಸಂಸತ್ ಅಧಿವೇಶನ ನಡೆಸುವ ಉದ್ದೇಶ ಹೊಂದಿದೆ. ಆದರೆ, ಸಾಂಕ್ರಾಮಿಕವನ್ನು ನಿಭಾಯಿಸಲು ಚಳಿಗಾಲವು ಅತ್ಯಂತ ನಿರ್ಣಾಯಕವಾಗಿದೆ. ಅದರಲ್ಲೂ ಇತ್ತೀಚೆಗೆ ದಿಲ್ಲಿಯಲ್ಲಿ ಸೋಂಕು ದಿಢೀರ್ ಏರಿಕೆಯಾಗಿದೆ. ಈ ಹಿನ್ನೆಲೆಯಲ್ಲಿ 2021ರ ಜನವರಿಯಲ್ಲಿ ಬಜೆಟ್ ಅಧಿವೇಶನ ಆರಂಭಿಸುವುದು ಸೂಕ್ತ ಎನಿಸುತ್ತದೆ. ಈ ಕುರಿತು ಅನೌಪಚಾರಿಕವಾಗಿ ವಿವಿಧ ಪಕ್ಷಗಳ ನಾಯಕರ ಅಭಿಪ್ರಾಯ ಸಂಗ್ರಹಿಸಲಾಗಿದ್ದು, ಅವರೂ ಸಹ ಸರಕಾರದ ನಿರ್ಧಾರಕ್ಕೆ ಸಹಮತ ವ್ಯಕ್ತಪಡಿಸಿದ್ದಾರೆ,'' ಎಂದು ಜೋಶಿ ಪತ್ರದಲ್ಲಿ ತಿಳಿಸಿದ್ದಾರೆ.

ಸಾಮಾನ್ಯವಾಗಿ ಪ್ರತಿವರ್ಷ ನವೆಂಬರ್ ಕೊನೆಯವಾರ ಅಥವಾ ಡಿಸೆಂಬರ್ ಮೊದಲ ವಾರ ಸಂಸತ್ ಚಳಿಗಾಲದ ಅಧಿವೇಶನ ಆರಂಭವಾಗುತ್ತದೆ.



ಒಟ್ಟಾಗಲ್ಲಿ ಕೊರೊನಾ 22 ಸಾವಿರ ಸೋಂಕು

ಕಳೆದ ಏಳು ತಿಂಗಳ ನಂತರ ಇದೇ ಮೊದಲ ಬಾರಿಗೆ ದೇಶದಲ್ಲಿ ಕೊರೊನಾ ಸೋಂಕಿನ ಸಂಖ್ಯೆ ಅತ್ಯಂತ ಕನಿಷ್ಠ ಮಟ್ಟಕ್ಕೆ ಇಳಿದಿದೆ. ಕಳೆದ 24 ಗಂಟೆಯಲ್ಲಿ ದೇಶಾದ್ಯಂತ ಕೇವಲ 22,065 ಮಂದಿಯಲ್ಲಿ ಹೊಸ ಸೋಂಕು ದೃಢಪಟ್ಟಿದೆ. ಈ ಮೂಲಕ ದೇಶದಲ್ಲಿ ಒಟ್ಟು ಸೋಂಕಿತರ ಸಂಖ್ಯೆ 99,06,165ಕ್ಕೆ ತಲುಪಿದೆ. ಒಂದೇ ದಿನ 354 ಸಾವಿನ ಪ್ರಕರಣಗಳು ವರದಿಯಾಗಿವೆ. ಈ ಮೂಲಕ ಸಾವಿನ ಸಂಖ್ಯೆ ಒಟ್ಟು 1,43,709ಕ್ಕೆ ತಲುಪಿದೆ. ಈ ಮಧ್ಯೆ, ಗುಣಮುಖರಾಗುತ್ತಿರುವವರ ಪ್ರಮಾಣ ಕೂಡ ಧಾರಿ ವಿರಿಕೆಯಾಗುತ್ತಿದ್ದು, ಶೇ.95ಕ್ಕೆ ಹೆಚ್ಚಾಗಿದೆ. ಈವರೆಗೂ 94,22,636 ಮಂದಿ ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಪ್ರಸ್ತುತ 3,39,820 ಸಕ್ರಿಯ ಪ್ರಕರಣಗಳಿವೆ. 24 ಗಂಟೆಯಲ್ಲಿ 9,93,665 ಟೆಸ್ಟ್‌ಗಳನ್ನು ನಡೆಸಲಾಗಿತ್ತು ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ.

ಕೊರೊನಾ ವೈರಸ್ ಮೊದಲು ಮನುಷ್ಯರಿಂದ ಮನುಷ್ಯರಿಗೆ ಹರಡಿದ ಘಟನೆಯು ಭಾರತದಲ್ಲಿಯೇ ಮೊದಲು ನಡೆದಿರಬಹುದು ಎಂದು ಆರೋಪಿಸಿದ್ದ ಅಧ್ಯಯನ ವರದಿಯನ್ನು ಚೀನಾ ವೈದ್ಯಕೀಯ ಪತ್ರಿಕೆ 'ದಿ ಲ್ಯಾನ್ಸೆಟ್' ಹಿಂದಕ್ಕೆ ಪಡೆದುಕೊಂಡಿದೆ. ಅಧ್ಯಯನ ವರದಿಯನ್ನು ಮೊದಲು ವೈದ್ಯಕೀಯ ಪತ್ರಿಕೆಯ ಮುದ್ರಣಪೂರ್ವ ದೇದಿಕೆಯಾದ ಎಸ್‌ಎಸ್‌ಆರ್‌ಎನ್ ಡಾಟ್ ಕಾಂನಲ್ಲಿನ. 17ರಂದು ಪ್ರಕಟಿಸಲಾಗಿತ್ತು. ಆದರೆ ಅದನ್ನು ಹಿಂಪಡೆಯಲಾಗಿದೆ ಎಂದು ಚೀನಾದ ಸರಕಾರಿ ಸ್ವಾಮ್ಯದ ಗ್ಲೋಬಲ್ ಟೈಮ್ಸ್ ವರದಿ ತಿಳಿಸಿದೆ.

ಸಿಂಗಳೂರಲ್ಲಿ ಕೊರೊನಾಗೆ ಸಾವು

ಕೊರೊನಾ ಸೋಂಕಿಗೆ ಒಳಗಾಗಿದ್ದ ಭಾರತೀಯ ನೌಕಾದಳದ ಉಪ ಅಡ್ಮಿರಲ್ ಶ್ರೀಕಾಂತ್ (60) ಅವರು ದಿಲ್ಲಿಯ ಆಸ್ಪತ್ರೆಯಲ್ಲಿ ಮಂಗಳವಾರ ಚಿಕಿತ್ಸೆ ಫಲಿಸದೆ ನಿಧನರಾಗಿದ್ದಾರೆ. ಬೆಂಗಳೂರಿನ ಜಾಲಹಳ್ಳಿಯವರಾದ ಅವರು ಕಾರವಾರದ ನೌಕಾನೆಲೆ 'ಸೀಬರ್ಡ್ ಯೋಜನೆ'ಯ ಮಹಾ ನಿರ್ದೇಶಕರಾಗಿದ್ದರು. ಇದಕ್ಕೂ ಮೊದಲು ಅವರು ಅಣುಶಕ್ತಿ ಸುರಕ್ಷತೆಯ ಇನ್ಸ್‌ಪೆಕ್ಟರ್ ಜನರಲ್ ಹಾಗೂ ರಾಷ್ಟ್ರೀಯ ಭದ್ರತಾ ಕಾಲೇಜಿನ ಕಮಾಂಡೆಂಟ್ ಆಗಿಯೂ ಕರ್ತವ್ಯ ನಿರ್ವಹಿಸಿದ್ದರು. ನೌಕಾದಳದ ಸಬ್ ಮರೀನ್ ವಿಭಾಗದ ಅತ್ಯಂತ ಹಿರಿಯ ಅಧಿಕಾರಿಯಾಗಿದ್ದ ಅವರು, ಡಿ.31ರಂದು ನಿವೃತ್ತಿ ಹೊಂದಲಿದ್ದರು. ಸಬ್‌ಮರೀನ್‌ಗೆ ಸೇರುವ ಮೊದಲು ಅವರು ವಿಜಯಪುರದ ಸೈನಿಕ ಶಾಲೆಯಲ್ಲಿ ತರಬೇತಿ ಪಡೆದಿದ್ದರು. ಶ್ರೀಕಾಂತ್ ಅವರ ನಿಧನಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ರದ್ಧಾಂಜಲಿ ಸಲ್ಲಿಸಿದ್ದು, ''ದೇಶಕ್ಕಾಗಿ ಅವರ ಸೇವೆಯನ್ನು ರಕ್ಷಣಾ ಸಚಿವಾಲಯ ಮತ್ತು ಭಾರತೀಯ ನೌಕಾಪಡೆಯು ಸದಾ ನೆನಪಿಸಿಕೊಳ್ಳುತ್ತದೆ,'' ಎಂದು ಟ್ವೀಟ್ ಮಾಡಿದ್ದಾರೆ.

ಕಳೆದ ಏಳೆಂಟು ತಿಂಗಳಿನಿಂದ ಸತತವಾಗಿ ಕೋವಿಡ್-19 ಕರ್ತವ್ಯದಲ್ಲಿ ತೊಡಗಿರುವ ವೈದ್ಯರಿಗೆ ವಿರಾಮ ನೀಡುವ ಬಗ್ಗೆ ಪರಿಗಣಿಸುವಂತೆ ಕೇಂದ್ರ ಸರಕಾರಕ್ಕೆ ಸುಪ್ರೀಂ ಕೋರ್ಟ್ ಮಂಗಳವಾರ ಸಲಹೆ ನೀಡಿದೆ. ಎದುರಿದೆ ಕೆಲಸ ಮಾಡುತ್ತಿರುವುದು ವೈದ್ಯರ ಮಾನಸಿಕ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರಬಹುದು ಎಂದು ಸುಪ್ರೀಂಕೋರ್ಟ್ ಕಳವಳ ವ್ಯಕ್ತಪಡಿಸಿದೆ. ಈ ಕುರಿತು ಸ್ವಯಂ ಪ್ರೇರಿತವಾಗಿ ದಾಖಲಿಸಿಕೊಂಡಿದ್ದ ಪ್ರಕರಣವನ್ನು ನ್ಯಾಯಮೂರ್ತಿಗಳಾದ ಅಶೋಕ್ ಭೂಷಣ್, ಆರ್.ಎಸ್. ರೆಡ್ಡಿ ಮತ್ತು ಎಂ.ಆರ್ ಶಾ ಅವರನ್ನು ಒಳಗೊಂಡ ನ್ಯಾಯಪೀಠ ವಿಚಾರಣೆ ನಡೆಸಿತು. ಈ ವೇಳೆ ವೈದ್ಯರಿಗೆ ಕೆಲ ಸಮಯ ವಿರಾಮ ನೀಡುವ ಸಲಹೆಯನ್ನು ಪರಿಗಣಿಸುವಂತೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರಿಗೆ ಸೂಚಿಸಿತು. ಅವರು ಸಲಹೆಯನ್ನು ಸರಕಾರ ಪರಿಗಣಿಸಲಿದೆ ಎಂದು ಭರವಸೆ ನೀಡಿದರು.